# Bangalore
# Regional News
# 07.07.2025 / 2.30 pm

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

<u>ಮುಖ್ಯಾಂಶಗಳು</u>

೧. ಬೆಂಗಳೂರಿನಲ್ಲಿ ನೂತನ ಮೆಟ್ರೋ ಮಾರ್ಗಗಳಲ್ಲಿ ಡಬಲ್ ಡೆಕ್ಕರ್ ಮೇಲ್ಸೇತುವೆಗಳ ನಿರ್ಮಾಣ

೨. ಬ್ರಿಕ್ಸ್ ಶೃಂಗಸಭೆ : ಬಹು ಧ್ರುವೀಕೃತ ಜಾಗತಿಕ ವ್ಯವಸ್ಥೆಗೆ ಪ್ರಧಾನಿ ನರೇಂದ್ರ ಮೋದಿ ಕರೆ

೩. ಮೈಸೂರು ದಸರಾ ಮಹೋತ್ಸವದಲ್ಲಿ ವೈಮಾನಿಕ ಪ್ರದರ್ಶನ ಆಯೋಜಿಸುವ ಕುರಿತು ರಕ್ಷಣಾ ಸಚಿವರೊಂದಿಗೆ ನಾಳೆ ಮುಖ್ಯಮಂತ್ರಿ ಸಭೆ

೪. ’ಭೂ ಸುರಕ್ಷಾ’ ಯೋಜನೆ; ರಾಜ್ಯದಲ್ಲಿಯೇ ದಾವಣಗೆರೆ ಜಿಲ್ಲೆ ಪ್ರಥಮ

೫. ಬಸವಸಾಗರ ಜಲಾಶಯಕ್ಕೆ ಹೆಚ್ಚಿನ ಪ್ರಮಾಣದ ನೀರು; ಮುನ್ನೆಚ್ಚರಿಕೆ ವಹಿಸುವಂತೆ ಕೃಷ್ಣಾ ನದಿ ಪಾತ್ರದ ಗ್ರಾಮಗಳ ಜನತೆಗೆ ಸೂಚನೆ

><><><><><><><><

ಬೆಂಗಳೂರು ನಗರದಲ್ಲಿ ೧೩೦ ಕಿಲೋ ಮೀಟರ್ ವ್ಯಾಪ್ತಿಯಲ್ಲಿ ಮೆಟ್ರೋ ಮೇಲ್ಸೇತುವೆಗಳಿದ್ದು, ನೂತನ ಮೆಟ್ರೋ ಮಾರ್ಗಗಳಿರುವ ಕಡೆಗಳಲ್ಲಿ ಡಬಲ್ ಡೆಕ್ಕರ್ ಮೇಲ್ಸೇತುವೆಗಳ ನಿರ್ಮಾಣ ಮಾಡಲಾಗುವುದು ಎಂದು ಉಪಮುಖ್ಯಮಂತ್ರಿ ಡಿ.ಕೆಶಿವಕುಮಾರ್ ತಿಳಿಸಿದ್ದಾರೆ. ಈ ಬಗ್ಗೆ ಸಾಮಾಜಿಕ ಜಾಲತಾಣದಲ್ಲಿ ಮಾಹಿತಿ ಹಂಚಿಕೊಂಡಿರುವ ಅವರು, ಈಗಾಗಲೇ ೭ ಕಿಲೋ ಮೀಟರ್ ಡಬಲ್ ಡೆಕ್ಕರ್ ಮೆಟ್ರೋ ಮಾರ್ಗ ನಿರ್ಮಾಣ ಮಾಡಲಾಗಿದೆ. ಶೀಘ್ರದಲ್ಲೇ, ೩೭ ಕಿಲೋ ಮೀಟರ್ ಡಬಲ್ ಡೆಕ್ಕರ್ ನಿರ್ಮಾಣಕ್ಕೆ ಗುತ್ತಿಗೆ ಪ್ರಕ್ರಿಯೆ ಅಂತಿಮಗೊಳಿಸಲಾಗುವುದು ಎಂದು ಹೇಳಿದರು.

><><><><><><><><

ಎರಡು ದಿನಗಳ ಬ್ರಿಕ್ಸ್ ಶೃಂಗಸಭೆಯು ಅತಿವೇಗವಾಗಿ ಬದಲಾಗುತ್ತಿರುವ ಜಾಗತಿಕ ಬೆಳವಣಿಗೆಗಳ ಸಂದರ್ಭದಲ್ಲಿ ಪ್ರಾಮುಖ್ಯತೆ ಪಡೆದಿದೆ ಎಂದು ವಿದೇಶಾಂಗ ವ್ಯವಹಾರಗಳ ಸಚಿವಾಲಯದ ಆರ್ಥಿಕ ಸಂಬಂಧಗಳ ಕಾರ್ಯದರ್ಶಿ ದಮ್ಮು ರವಿ ತಿಳಿಸಿದ್ದಾರೆ. ರಿಯೊ ಡಿ ಜೆನೈರೊದಲ್ಲಿ ಮಾಧ್ಯಮಗಳಿಗೆ ಮಾಹಿತಿ ನೀಡಿದ ಅವರು, ಮುಂದಿನ ವರ್ಷ ಭಾರತ ಬ್ರಿಕ್ಸ್ ಶೃಂಗಸಭೆ ಅಧ್ಯಕ್ಷತೆ ವಹಿಸಲಿರುವ ಹಿನ್ನೆಲೆಯಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರ ಈ ಭೇಟಿ ಮಹತ್ವ ಪಡೆದಿದೆ. ಸಭೆಯಲ್ಲಿ ಪ್ರಧಾನಿ ನರೇಂದ್ರ ಮೋದಿ ಬಹು ಧ್ರುವೀಕೃತ ಎಲ್ಲರನ್ನೊಳಗೊಳ್ಳುವ ಜಾಗತಿಕ ವ್ಯವಸ್ಥೆಗಾಗಿ ಕರೆ ನೀಡಿದರು. ವಿಶ್ವಸಂಸ್ಥೆ ಭದ್ರತಾ ಮಂಡಳಿ, ಅಂತಾರಾಷ್ಟ್ರೀಯ ಹಣಕಾಸು ಒಕ್ಕೂಟ, ವಿಶ್ವ ಬ್ಯಾಂಕ್ ಮತ್ತು ವಿಶ್ವ ವ್ಯಾಪಾರ ಸಂಸ್ಥೆ ಸೇರಿದಂತೆ ಜಾಗತಿಕ ಆಡಳಿತ ಸಂಸ್ಥೆಗಳು ಇಂದಿನ ಜಾಗತಿಕ ಪರಿಸ್ಥಿತಿಗಳಿಗೆ ಅನುಗುಣವಾಗಿ ತ್ವರಿತ ಸುಧಾರಣೆಗೆ ಒಳಗಾಗಬೇಕು ಎಂದು ಪ್ರಧಾನಿ ಮೋದಿ ಕರೆ ನೀಡಿದ್ದಾರೆ. ಶೃಂಗಸಭೆ ಕುರಿತು ಬ್ರೆಜಿಲ್‌ನ ರಿಯೋ ಡಿ ಜನೈರೋ ದಲ್ಲಿರುವ ನಮ್ಮ ಬಾತ್ಮೀದಾರರಿಂದ ಹೆಚ್ಚಿನ ಮಾಹಿತಿ.

><><><><><><><><

ಮೈಸೂರು ದಸರಾ ಮಹೋತ್ಸವದಲ್ಲಿ ವೈಮಾನಿಕ ಪ್ರದರ್ಶನ ಆಯೋಜಿಸುವ ಕುರಿತು ಚರ್ಚಿಸಲು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ನಾಳೆ ದೆಹಲಿಯಲ್ಲಿ ರಕ್ಷಣಾ ಸಚಿವ ರಾಜನಾಥ ಸಿಂಗ್ ಅವರನ್ನು ಭೇಟಿಯಾಗಲಿದ್ದಾರೆ. ನಾಳೆ ಬೆಳಗ್ಗೆ ದೆಹಲಿಗೆ ಪ್ರಯಾಣ ಬೆಳೆಸಲಿರುವ ಮುಖ್ಯಮಂತ್ರಿಯವರು, ಸಂಜೆ ರಕ್ಷಣಾ ಸಚಿವ ರಾಜನಾಥ ಸಿಂಗ್ ಅವರನ್ನು ಭೇಟಿ ಮಾಡಿ, ಚರ್ಚಿಸಲಿದ್ದಾರೆ.

><><><><><><><><

ರಾಜ್ಯ ಸರ್ಕಾರದ ಮಹತ್ವಕಾಂಕ್ಷೆಯ ’ಭೂ ಸುರಕ್ಷಾ’ ಯೋಜನೆಯಡಿ ದಾವಣಗೆರೆ ಜಿಲ್ಲೆಯಲ್ಲಿ ೧ ಕೋಟಿ ೧೩ ಲಕ್ಷ ಕಂದಾಯ ದಾಖಲೆಗಳನ್ನು ಡಿಜಿಟಲೀಕರಣ ಮಾಡಲಾಗಿದ್ದು, ಈ ಕಾರ್ಯದಲ್ಲಿ ದಾವಣಗೆರೆ ಜಿಲ್ಲೆಯು ರಾಜ್ಯದಲ್ಲಿಯೇ ಮೊದಲ ಸ್ಥಾನದಲ್ಲಿದೆ ಎಂದು ಜಿಲ್ಲಾಧಿಕಾರಿ ಡಾ.ಜಿ.ಎಂ.ಗಂಗಾಧರ ಸ್ವಾಮಿ ತಿಳಿಸಿದ್ದಾರೆ. ಈ ಕುರಿತು ಆಕಾಶವಾಣಿಯೊಂದಿಗೆ ಮಾತನಾಡಿದ ಅವರು, ಕಳೆದ ಅನೇಕ ದಶಕಗಳಿಂದ ಕಾಗದ ರೂಪದಲ್ಲಿ ಇದ್ದ ಹಳೇ ಪಹಣಿ, ಮ್ಯುಟೇಷನ್, ಲ್ಯಾಂಡ್ ಗ್ರಾಂಟ್ ರಿಜಿಸ್ಟರ್, ಬಗರ್‌ಹುಕುಂ ಕಡತ ಸೇರಿದಂತೆ ಭೂಮಿಯ ಎಲ್ಲಾ ದಾಖಲೆಗಳನ್ನು ಸ್ಕ್ಯಾನಿಂಗ್ ಮಾಡಿ, ಡಿಜಿಟಲ್ ರೂಪದಲ್ಲಿ ದಾಖಲಿಸಲಾಗಿದೆ ಎಂದರು. ಭೂ ಸುರಕ್ಷಾ ಯೋಜನೆಯಡಿ ಕಂದಾಯ ದಾಖಲೆಗಳನ್ನು ಸ್ಕ್ಯಾನಿಂಗ್ ಮಾಡುವ ಕೆಲಸದಲ್ಲಿ ದಾವಣಗೆರೆ ಜಿಲ್ಲೆ ರಾಜ್ಯದಲ್ಲಿಯೇ ಪ್ರಥಮ ಸ್ಥಾನದಲ್ಲಿದ್ದು, ಪಹಣಿಯೊಂದಿಗೆ ಆಧಾರ್ ಜೋಡಣೆಯಲ್ಲಿಯು ಮೊದಲ ಸ್ಥಾನದಲ್ಲಿದೆ. ಅಧಿಕಾರಿಗಳು ಒಂದು ತಂಡವಾಗಿ ಕೆಲಸ ಮಾಡುತ್ತಿದ್ದಾರೆ ಎಂದು ಜಿಲ್ಲಾಧಿಕಾರಿ ಡಾ.ಜಿ.ಎಂ.ಗಂಗಾಧರ ಸ್ವಾಮಿ ಹೇಳಿದರು.

><><><><><><><><

ಹಾವೇರಿ ಜಿಲ್ಲೆ ಹಾನಗಲ್ ತಾಲೂಕಿನ ೧೫ ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ ಕನ್ನಡದ ಜೊತೆಗೆ ಆಂಗ್ಲ ಮಾಧ್ಯಮ ತರಗತಿ ಆರಂಭಿಸಲು ಸರ್ಕಾರದಿಂದ ಅನುಮತಿ ಲಭಿಸಿದೆ. ಪ್ರಸಕ್ತ ಶೈಕ್ಷಣಿಕ ವರ್ಷದಿಂದಲೇ ಆಂಗ್ಲ ಮಾಧ್ಯಮ ತರಗತಿಗಳು ಆರಂಭಗೊಳ್ಳಲಿವೆ ಎಂದು ಶಾಸಕ ಶ್ರೀನಿವಾಸ ಮಾನೆ ತಿಳಿಸಿದ್ದಾರೆ. ಕಳೆದ ಶೈಕ್ಷಣಿಕ ವರ್ಷದಲ್ಲಿ ಹಾನಗಲ್ ಮಾದರಿ ಕನ್ನಡ ಮತ್ತು ಆಂಗ್ಲ ಮಾಧ್ಯಮ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಆಂಗ್ಲ ಮತ್ತು ಕನ್ನಡ ಮಾಧ್ಯಮದಲ್ಲಿ ಪ್ರೌಢಶಾಲೆಗೆ ಮಂಜೂರಾತಿ ದೊರೆತಿತ್ತು. ಅಲ್ಲದೇ ಒಂದನೇ ತರಗತಿಯ ಆಂಗ್ಲ ಮಾಧ್ಯಮದಲ್ಲಿ ಹೆಚ್ಚುವರಿ ವಿಭಾಗ ಆರಂಭಿಸಲು ಸಹ ಅನುಮತಿ ಲಭಿಸಿತ್ತು ಎಂದು ಅವರು ವಿವರಿಸಿದರು.

><><><><><><><><

ಮಹಾರಾಷ್ಟ್ರದ ಪಶ್ಚಿಮಘಟ್ಟ ಪ್ರದೇಶದಲ್ಲಿ ಮಳೆ ಹೆಚ್ಚಾಗುತ್ತಿದ್ದರಿಂದಾಗಿ ಯಾದಗಿರಿ ಜಿಲ್ಲೆಯ ಹುಣಸಗಿ ತಾಲೂಕಿನ ನಾರಾಯಣಪುರ ಗ್ರಾಮದ ಬಸವಸಾಗರ ಜಲಾಶಯಕ್ಕೆ ಮತ್ತೆ ಅಪಾರ ಪ್ರಮಾಣದ ನೀರು ಹರಿದು ಬರುತ್ತಿದೆ. ಇಂದು ಬೆಳಗ್ಗೆ ೧ ಲಕ್ಷದ ೧೫ ಸಾವಿರ  ಕ್ಯೂಸೆಕ್ ನೀರು ಬಸವಸಾಗರ ಜಲಾಶಯಕ್ಕೆ ಹರಿದು ಬಂದಿದೆ. ಇದರಿಂದಾಗಿ ಬಸವಸಾಗರ ಜಲಾಶಯದ ೩೦ ಕ್ರಸ್ಟ್ ಗೇಟ್‌ಗಳ ಮೂಲಕ ೧ ಲಕ್ಷದ ೧೨ ಸಾವಿರದ ೫೭೭ ಕ್ಯೂಸೆಕ್ ನೀರನ್ನು ಕೃಷ್ಣಾ ನದಿಗೆ ಹಾಗೂ ಮುರುಡೇಶ್ವರ ವಿದ್ಯುತ್ ಉತ್ಪಾದನಾ ಘಟಕದ ಮೂಲಕ ೬ ಸಾವಿರ ಕ್ಯೂಸೆಕ್ ನೀರನ್ನು ನದಿಗೆ ಹರಿಸಲಾಗುತ್ತಿದೆ. ಹೆಚ್ಚಿನ

ಪ್ರಮಾಣದಲ್ಲಿ ನೀರು ಬಸವಸಾಗರ ಜಲಾಶಯಕ್ಕೆ ಹರಿದು ಬರುತ್ತಿದ್ದು ಹಿನ್ನೆಲೆಯಲ್ಲಿ ಹೆಚ್ಚಿನ ಪ್ರಮಾಣದಲ್ಲಿ ನೀರನ್ನು ಕೃಷ್ಣಾ ನದಿಗೆ ಹರಿಸಲಾಗುತ್ತಿದೆ. ಆದ್ದರಿಂದ ನದಿ ಪಾತ್ರದಲ್ಲಿರುವ ಗ್ರಾಮಗಳ ಜನತೆ ಎಚ್ಚರಿಕೆಯಿಂದ ಇರುವಂತೆ ಬಸವಸಾಗರ ಜಲಾಶಯದ ಕಾರ್ಯನಿರ್ವಾಹಕ ಎಂಜಿನಿಯರ್ ಹೆಚ್.ಬಿ.ಕೊನ್ನೂರ್ ಮನವಿ ಮಾಡಿದ್ದಾರೆ.

><><><><><><><><

ಚಿಕ್ಕಮಗಳೂರು ಜಿಲ್ಲೆಯ ಚಾರ್ಮಾಡಿ ಘಾಟ್ ವ್ಯಾಪ್ತಿಯಲ್ಲಿ ಮಳೆ ಹಾಗೂ ದಟ್ಟ ಮಂಜು ಆವರಿಸಿದ ವಾತವಾರಣವಿದ್ದು, ಈ ರಸ್ತೆಯಲ್ಲಿ ವಾಹನ ಸವಾರರು ಎಚ್ಚರಿಕೆಯಿಂದ ಸಂಚರಿವಂತೆ ರಸ್ತೆ ಪ್ರಾಧಿಕಾರದ ಅಧಿಕಾರಿಗಳು ಸೂಚನೆ ನೀಡಿದ್ದಾರೆ.ಜಿಲ್ಲೆಯ ಮುಳಯ್ಯನಗಿರಿ ಪ್ರದೇಶದ ಮೂಡಿಗೆರೆ ತಾಲೂಕಿನ ಹಲವು ಪ್ರವಾಸಿ ತಾಣಗಳಲ್ಲಿ ಆಗಾಗ ದಟ್ಟ ಮಂಜು ಆವರಿಸುತ್ತಿದ್ದು, ಮಂಜಿನಿಂದ ರಸ್ತೆ ಸರಿಯಾಗಿ ಕಾಣದೆ ಸಮಸ್ಯೆಗಳಾಗುವ ಸಾಧ್ಯತೆ ಇರುವುದರಿಂದ ಎಚ್ಚರಿಕೆ ನೀಡಲಾಗಿದೆ. ಇನ್ನು ಜಿಲ್ಲೆಯ ಚಿಕ್ಕಮಗಳೂರು, ಮೂಡಿಗೆರೆ, ಕೊಪ್ಪ, ಶೃಂಗೇರಿ ಭಾಗದಲ್ಲಿ ಇಂದು ಮುಂಜಾನೆಯಿಂದಲೂ ಗಾಳಿ-ಮಳೆಯಾಗುತ್ತಿದೆ.

><><><><><><><><

ಚಿಕ್ಕಬಳ್ಳಾಪುರ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಹಾಗೂ ವಕೀಲರ ಸಂಘದ ಸಹಯೋಗದಲ್ಲಿ ಇದೇ ತಿಂಗಳ ೧೨ ರಂದು ರಾಷ್ಟ್ರೀಯ ಲೋಕ ಅದಾಲತ್ ಹಮ್ಮಿಕೊಳ್ಳಲಾಗಿದೆ ಎಂದು ಜಿಲ್ಲಾ ಪ್ರಧಾನ ಹಾಗೂ ಸತ್ರ ನ್ಯಾಯಾಧೀಶೆ ನೇರಳೆ ವೀರಭದ್ರಯ್ಯ ಭವಾನಿ ತಿಳಿಸಿದ್ದಾರೆ. ಬೃಹತ್ ಲೋಕ ಅದಾಲತ್ ಕುರಿತು ಮಾಹಿತಿ ನೀಡಿರುವ ಅವರು, ಕಕ್ಷಿದಾರರು ವಕೀಲರ ಸಹಕಾರದೊಂದಿಗೆ ವಿವಿಧ ಪ್ರಕರಣಗಳನ್ನು ರಾಜೀ ಸಂಧಾನದ ಮೂಲಕ ಇತ್ಯರ್ಥಪಡಿಸಿಕೊಳ್ಳುವ ಮೂಲಕ ನ್ಯಾಯಾಲಯಕ್ಕೆ ಅಲೆಯುವುದನ್ನು ತಪ್ಪಿಸುವ ಜೊತೆಗೆ ಹಣ, ಸಮಯ ಉಳಿಸಿಕೊಂಡು ನೆಮ್ಮದಿ ಕಾಣಬಹುದು ಎಂದರು.  ಜುಲೈ ೧೨ ರಂದು ಜಿಲ್ಲಾ ನ್ಯಾಯಾಲಯ ಹಾಗೂ ತಾಲೂಕು ಮಟ್ಟದ ವಿವಿಧ ನ್ಯಾಯಾಲಯಗಳಲ್ಲಿ ಲೋಕ ಅದಾಲತ್ ನಡೆಯಲಿದೆ. ಈ ಅದಾಲತ್‌ನಲ್ಲಿ ನ್ಯಾಯಾಲಯದಲ್ಲಿರುವ ಹಾಲಿ ಪ್ರಕರಣಗಳು ಹಾಗೂ ವ್ಯಾಜ್ಯ ಪೂರ್ವ ಪ್ರಕರಣಗಳನ್ನು ಕಕ್ಷಿದಾರರು ಪರಸ್ಪರ ಮುಖಾಮುಖಿಯಾಗಿ ರಾಜೀ ಸಂಧಾನದ ಮೂಲಕ ಬಗೆಹರಿಸಿಕೊಂಡು ಪ್ರಕರಣಗಳಿಂದ ಮುಕ್ತಿ ಕಾಣಬಹುದಾಗಿದೆ ಎಂದು ನ್ಯಾಯಾಧೀಶೆ ನೇರಳೆ ವೀರಭದ್ರಯ್ಯ ಭವಾನಿ ಹೇಳಿದರು.

><><><><><><><><

ವಿದ್ಯಾರ್ಥಿಗಳಿಗೆ ವಿದ್ಯೆಯ ಜೊತೆಗೆ ಸಂಸ್ಕೃತಿ, ಸಂಸ್ಕಾರವೂ ಇರಬೇಕು. ಕಠಿಣ ಪರಿಶ್ರಮ ಉತ್ತಮ ಹುದ್ದೆಗೆ ಕರೆದುಕೊಂಡು ಹೋಗುತ್ತದೆ ಎಂದು ಯಾದಗಿರಿ ಶಾಸಕ ಚನ್ನಾರೆಡ್ಡಿ ಪಾಟೀಲ್ ತುನ್ನೂರು ಹೇಳಿದ್ದಾರೆ. ಯಾದಗಿರಿ ನಗರದ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು ಸಭಾಂಗಣದಲ್ಲಿ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು ಮತ್ತು ತಾಲೂಕು ಕನ್ನಡ ಸಾಹಿತ್ಯ ಪರಿಷತ್ತು ವತಿಯಿಂದ ಹಮ್ಮಿಕೊಂಡಿದ್ದ ಎಸ್ಎಸ್ಎಲ್ಸಿ ಪರೀಕ್ಷೆ-೧ ರಲ್ಲಿ ಕನ್ನಡ ಭಾಷಾ ವಿಷಯದಲ್ಲಿ ಶೇಕಡ ೧೦೦ರಷ್ಟು ಅಂಕ ಪಡೆದ ವಿದ್ಯಾರ್ಥಿಗಳಿಗೆ 'ಕನ್ನಡ ವಿದ್ಯಾಸ್ಫೂರ್ತಿ' ಪ್ರಶಸ್ತಿ ಪ್ರದಾನ ಸಮಾರಂಭ ಉದ್ಘಾಟಿಸಿ ಅವರು ಮಾತನಾಡಿದರು.

><><><><><><><><

**<u>ಸಂಕ್ಷಿಪ್ತ ಸುದ್ದಿ:</u>**

೧. ಗ್ರೇಟರ್ ಬೆಂಗಳೂರು ಪ್ರಾಧಿಕಾರದ ಕುರಿತು ವಿಧಾನಸೌಧದಲ್ಲಿಂದು ಬೆಂಗಳೂರು ನಗರಾಭಿವೃದ್ಧಿ ಸಚಿವ, ಉಪ ಮುಖ್ಯಮಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರ ಅಧ್ಯಕ್ಷತೆಯಲ್ಲಿ ಸಭೆ ನಡೆಯಿತು. ಸಭೆಯಲ್ಲಿ ಗೃಹ ಸಚಿವ ಜಿ.ಪರಮೇಶ್ವರ್, ಗ್ರೇಟರ್ ಬೆಂಗಳೂರು ಆಡಳಿತ ವಿಧೇಯಕ ೨೦೨೪ರ ಜಂಟಿ ಪರಿಶೀಲನಾ ಸಮಿತಿಯ ಅಧ್ಯಕ್ಷ ರಿಜ್ವಾನ್ ಅರ್ಷದ್ ಸೇರಿದಂತೆ ಅಧಿಕಾರಿಗಳು, ತಜ್ಞರು ಉಪಸ್ಥಿತರಿದ್ದರು.

**><><><><><><><><><><><**